ಕರ್ನಾಟಕ ಸರ್ಕಾರ

**ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು**

ಸಂಖ್ಯೆ : ಸಿ5(5)ಬಡ್ತಿ-19/2013-14

ದಿನಾಂಕ : 18-11-2016

**ಅಧಿಸೂಚನೆ**

ವಿಷಯ :- ಸಾರ್ವಜನಿಕ ಶಿಕ್ಷಣ ಇಲಾಖೆಯ ಬೆರಳಚ್ಚುಗಾರರಿಗೆ ಶೀಘ್ರಲಿಪಿಗಾರರ ಹುದ್ದೆಗೆ ಸ್ಥಾನಪನ್ನ ಬಡ್ತಿಯನ್ನು ನೀಡುವ ಬಗ್ಗೆ.

ಉಲ್ಲೇಖ :- ಸರ್ಕಾರದ ಆದೇಶ ಸಂಖ್ಯೆ : ಡಿಪಿಎಆರ್ 12 ಎಸ್‌ಡಿಇ 2005 ದಿ: 29-01-2008.

2 :- ಸರ್ಕಾರದ ಆದೇಶ ಸಂಖ್ಯೆ : ಇಡಿ 464 ಡಿಪಿಐ 2008 ದಿ : 06-01-2009.

3 :- ದಿನಾಂಕ : 26-09-2016 ರಂದು ನಡೆದ ಇಲಾಖಾ ಮುಂಬಡ್ತಿ ಸಮಿತಿಯ ಸಭಾ ನಡಾವಳಿಗಳು.

4:- ದಿನಾಂಕ: 07-11-2016 ರಂದು ನಡೆದ ಸ್ಥಳ ಆಯ್ಕೆ ಪ್ರಕ್ರಿಯೆಯಲ್ಲಿ ಅರ್ಹ ಬೆರಳಚ್ಚುಗಾರರು ಭಾಗವಹಿಸಿ, ಸ್ಥಳ ಆಯ್ಕೆ ಮಾಡಿಕೊಂಡಿರುವಂತೆ.

* * * * * *

**ಪ್ರಸ್ತಾವನೆ :**

ಸಾರ್ವಜನಿಕ ಶಿಕ್ಷಣ ಇಲಾಖೆಯ ಬೆಂಗಳೂರು ಆಯುಕ್ತಾಲಯದ ಆಡಳಿತ ವ್ಯಾಪ್ತಿಯಲ್ಲಿ ಬರುವ ಶೀಘ್ರಲಿಪಿಗಾರರ ವೃಂದಕ್ಕೆ ಉಲ್ಲೇಖಿತ (1) ರ ಸರ್ಕಾರದ ಆದೇಶ ಹಾಗೂ ಉಲ್ಲೇಖಿತ (2) ರ ಸುತ್ತೋಲೆಯನ್ವಯ ಬೆಂಗಳೂರು ಮತ್ತು ಮೈಸೂರು ವಿಭಾಗದಲ್ಲಿ ಕಾರ್ಯನಿರ್ವಹಿಸುತ್ತಿರುವ ಬೆರಳಚ್ಚುಗಾರರಿಗೆ ಶೀಘ್ರಲಿಪಿಗಾರರ ಹುದ್ದೆಗೆ ಬಡ್ತಿಯನ್ನು ನೀಡಲು ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ರವರನ್ನು ಪ್ರಾಧಿಕಾರಿಯನ್ನಾಗಿ ನೇಮಿಸಿ ಆದೇಶಿಸಲಾಗಿದೆ. ಅದರಂತೆ ಬೆಂಗಳೂರು ಆಯುಕ್ತಾಲಯದ ಆಡಳಿತ ವ್ಯಾಪ್ತಿಯಲ್ಲಿ ಬರುವ ಬೆರಳಚ್ಚುಗಾರರ ವೃಂದದ ಜೇಷ್ಠತಾ ಪಟ್ಟಿಗಳನ್ನು ಹೊರಡಿಸಲಾಗಿದೆ.

ಬೆಂಗಳೂರು ಆಯುಕ್ತಾಲಯದ ಆಡಳಿತ ವ್ಯಾಪ್ತಿಯಲ್ಲಿ ಬರುವ ಶೀಘ್ರಲಿಪಿಗಾರರ ಹುದ್ದೆಗಳಡಿಯಲ್ಲಿ ಪ್ರಸ್ತುತ ಖಾಲಿ ಇರುವ ಹುದ್ದೆಗಳಿಗೆ ಬೆರಳಚ್ಚುಗಾರರ ಹುದ್ದೆಯಿಂದ ವೃಂದ ಮತ್ತು ನೇಮಕಾತಿ ನಿಯಮಾವಳಿಗಳಂತೆ ಸ್ಥಾನಪನ್ನ ಬಡ್ತಿಯನ್ನು ನೀಡುವ ಸಲುವಾಗಿ ದಿನಾಂಕ: 26-09-2016 ರಂದು ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಅಧ್ಯಕ್ಷತೆಯಲ್ಲಿ ಇಲಾಖಾ ಮುಂಬಡ್ತಿಯ ಸಭೆಯನ್ನು ನಡೆಸಲಾಯಿತು.

ಇಲಾಖಾ ಮುಂಬಡ್ತಿ ಸಮಿತಿಯ ಸಭೆಯಲ್ಲಿ ಬಡ್ತಿಗಾಗಿ ಅರ್ಹರೆಂದು ಪರಿಗಣಿಸಿರುವ ಬೆರಳಚ್ಚುಗಾರರಿಗೆ ಅವರೇ ಸ್ವತ: ಸ್ಥಳಗಳನ್ನು ಆಯ್ಕೆ ಮಾಡಿಕೊಳ್ಳುವ ಸಲುವಾಗಿ ದಿನಾಂಕ: 07-11-2016 ರಂದು ಸ್ಥಳ ಆಯ್ಕೆ ಪ್ರಕ್ರಿಯೆಯನ್ನು ನಡೆಸಲಾಗಿ ಅರ್ಹ ನೌಕರರು ಸ್ಥಳಗಳನ್ನು ಆಯ್ಕೆ ಮಾಡಿಕೊಂಡಿದ್ದು, ಅವರುಗಳಿಗೆ ಸ್ಥಾನಪನ್ನ ಬಡ್ತಿಯನ್ನು ನೀಡುವ ಸಲುವಾಗಿ ಈ ಕೆಳಕಂಡ ಆದೇಶ.

**ಆದೇಶ :-**

ಸಾರ್ವಜನಿಕ ಶಿಕ್ಷಣ ಇಲಾಖೆಯ ಗ್ರೂಪ್ 'ಸಿ' ವೃಂದದ ವೇತನ ಶ್ರೇಣಿ ರೂ. 11600-21000 ರಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಈ ಕೆಳಕಂಡ ಬೆರಳಚ್ಚುಗಾರರುಗಳಿಗೆ ಗ್ರೂಪ್ 'ಸಿ' ವೃಂದದ ರೂ. 14550-26700 ರ ವೇತನ ಶ್ರೇಣಿಯ ಶೀಘ್ರಲಿಪಿಗಾರರ ಹುದ್ದೆಗಳಿಗೆ ಸ್ಥಾನಪನ್ನ ಬಡ್ತಿಯನ್ನು ನೀಡಿ ಅವರುಗಳ ಹೆಸರಿನ ಮುಂದೆ ಸೂಚಿಸಲಾಗಿರುವ ಹುದ್ದೆ ಮತ್ತು ಸ್ಥಳಗಳಿಗೆ ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶವಾಗುವವರೆಗೆ ಸ್ಥಳ ನಿಯುಕ್ತಿಗೊಳಿಸಿ ಆದೇಶಿಸಲಾಗಿದೆ.

| ಕ್ರಮ ಸಂಖ್ಯೆ | ಜೇಷ್ಠತಾ ಸಂಖ್ಯೆ | ಬೆರಳಚ್ಚುಗಾರರ ಹೆಸರು ಮತ್ತು ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿರುವ ಕಛೇರಿಯ ಹೆಸರು ಮತ್ತು ವಿಳಾಸ ಶ್ರೀಮತಿ / ಶ್ರೀ | ಶೀಘ್ರಲಿಪಿಗಾರರ ಹುದ್ದೆಗೆ ಸ್ಥಾನಪನ್ನ ಬಡ್ತಿಯನ್ನು ನೀಡಿ ಸ್ಥಳ ನಿಯುಕ್ತಿಗೊಳಿಸಿರುವ ಹುದ್ದೆ ಮತ್ತು ಕಛೇರಿಯ ವಿಳಾಸ |
|---|---|---|---|
| 1 | 51 | ಎಸ್.ಸರಿತ., ಬೆರಳಚ್ಚುಗಾರರು, ವಿಭಾಗೀಯ ಕಾರ್ಯದರ್ಶಿಗಳು ಹಾಗೂ ಪದನಿಮಿತ್ತ ಜಂಟಿ ನಿರ್ದೇಶಕರ ಕಛೇರಿ, ಮೈಸೂರು ವಿಭಾಗ, ಮೈಸೂರು. | ಶೀಘ್ರಲಿಪಿಗಾರರು, ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ (ಡಯಟ್), ಮೈಸೂರು (ಖಾಲಿ ಹುದ್ದೆಗೆ) |
| 2 | 54 | ಕೆ.ಪುಷ್ಪ., ಉಪನಿರ್ದೇಶಕರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಮೈಸೂರು ಜಿಲ್ಲೆ, ಮೈಸೂರು. | ಶೀಘ್ರಲಿಪಿಗಾರರು, ವಿಭಾಗೀಯ ಕಾರ್ಯದರ್ಶಿಗಳು ಹಾಗೂ ಪದನಿಮಿತ್ತ ಜಂಟಿ ನಿರ್ದೇಶಕರ ಕಛೇರಿ, ಮೈಸೂರು ವಿಭಾಗ, ಮೈಸೂರು. (ಖಾಲಿ ಹುದ್ದೆಗೆ) |

**ಷರತ್ತುಗಳು :-**

1. ನಿಗಧಿತ ವಿದ್ಯಾರ್ಹತೆಗಳಾದ ಪ್ರೌಢ ದರ್ಜೆಯ ಕನ್ನಡ ಬೆರಳಚ್ಚು ಹಾಗೂ ಪ್ರೌಢ ದರ್ಜೆಯ ಕನ್ನಡ ಶೀಘ್ರಲಿಪಿಗಾರರ ಪರೀಕ್ಷೆಗಳಲ್ಲಿ ಕನ್ನಡ ಬೆರಳಚ್ಚು ಹಾಗೂ ಕನ್ನಡ ಶೀಘ್ರಲಿಪಿ ವಿಷಯದಲ್ಲಿ ಉತ್ತೀರ್ಣತೆ ಹೊಂದಿರುವ ಬಗ್ಗೆ ಮೂಲ ಅಂಕ ಪಟ್ಟಿಗಳನ್ನು ಪರಿಶೀಲಿಸಿಕೊಂಡ ನಂತರ ಕರ್ತವ್ಯಕ್ಕೆ ಹಾಜರು ಪಡಿಸಿಕೊಳ್ಳತಕ್ಕದ್ದು.
2. ಮುಂಬಡ್ತಿ ನೀಡಿ ನಿಯುಕ್ತಿಗೊಳಿಸಿದ ಸ್ಥಳಗಳಲ್ಲಿ 15 ದಿನಗಳೊಳಗಾಗಿ ಹಾಜರಾಗದಿದ್ದಲ್ಲಿ ಮುಂಬಡ್ತಿ ಆದೇಶ ತಂತಾನೇ ರದ್ದಾಗುವುದು.

ಈ ಆದೇಶ ಜಾರಿಯಾದ 15 ದಿನಗಳ ಒಳಗಾಗಿ ಸ್ಥಾನಪನ್ನ ಬಡ್ತಿಯನ್ನು ಹೊಂದಿದ ನೌಕರರು ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಕಛೇರಿಯಿಂದ ಬಿಡುಗಡೆಯಾಗಿ, ಬಡ್ತಿಯನ್ನು ನೀಡಿರುವ ಸ್ಥಳದಲ್ಲಿ ಕರ್ತವ್ಯಕ್ಕೆ ಹಾಜರಾಗಲು ಈ ಮೂಲಕ ಆದೇಶಿಸಲಾಗಿದೆ. ಬಡ್ತಿ ಹೊಂದಿರುವ ನೌಕರರು ಕರ್ತವ್ಯಕ್ಕೆ ಹಾಜರಾದ ಬಗ್ಗೆ ವರದಿಯನ್ನು ಈ ಕಛೇರಿಗೆ ತಪ್ಪದೇ ಸಲ್ಲಿಸಲು ತಿಳಿಸಿದೆ.

[ಕರಡು ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ]

[ಎಸ್.ಕಾತ್ಯಾಯನಿದೇವಿ]
ಜಂಟಿ ನಿರ್ದೇಶಕರು[ಆಡಳಿತ]

18/11

ಇವರಿಗೆ:

1. ಸರ್ಕಾರದ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಮಾನ್ಯ ಆಯುಕ್ತರ ಆಪ್ತ ಕಾರ್ಯದರ್ಶಿಗಳಿಗೆ
3. ಸಂಬಂಧಿಸಿದ ಕಛೇರಿಯ ಮುಖ್ಯಸ್ಥರಿಗೆ.
4. ಸಂಬಂಧಿಸಿದ ನೌಕರರುಗಳಿಗೆ.
5. ಕಛೇರಿ ಪ್ರತಿ.

e:\2-ob backup\pc backup\steno promotion.docx